ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬ್ರಿಮ್ಸ್ ಕಾಲೇಜಿನಲ್ಲಿ ನಡೆದ ಅವ್ಯವಹಾರದ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

619(666) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ನಗರದ ಬ್ರಿಮ್ಸ್ ಕಾಲೇಜಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ತನಿಖೆ ಯಾವ ಹಂತದಲ್ಲಿದೆ;(ವಿವರ ನೀಡುವುದು)

(ಆ) ಬ್ರಿಮ್ಸ್ ನಲ್ಲಿ ನಡೆದ ಅವ್ಯವಹಾರಕ್ಕೆ ಕಾರಣರಾದವರು ಎನ್ನಲಾದ ಸಿಬ್ಬಂದಿಗಳನ್ನು ಅದೇ ಸ್ಥಳದಲ್ಲಿ ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವರುಗಳನ್ನು ಇಲಾಖೆಗೆ ಕಳುಹಿಸದಿರುವುದಕ್ಕೆ ಕಾರಣವೇನು; (ವಿವರ ನೀಡುವುದು)

(ಇ) ಕಳೆದ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಸರ್ಕಾರ ಭರವಸೆ ನೀಡಿದ್ದರು, ಇಲ್ಲಿಯವರೆಗೆ ತನಿಖೆ ಆರಂಭಿಸದಿರುವುದಕ್ಕೆ ಕಾರಣವೇನು; ಈ ಕುರಿತು ಸರ್ಕಾರದ ನಿಲುವೇನು ?